ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1828/2014

ಚಾಸಾ: 6 ಪ್ರಾಸಾ:5

ದಿನಾಂಕ: 10.03.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ದಿನೇಶ್ ಚಂದ್ರ ಶೆಟ್ಟಿ |
| ತಂದೆಯ ಹೆಸರು | : | ಸುರೇಂದ್ರ ಶೆಟ್ಟಿ |
| ವಯಸ್ಸು | : | 51 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಬೇಳೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**<u>ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:</u>**

ಆರೋಪಿತರ ಪರಿಚಯವಿಲ್ಲ. ಸಾಕ್ಷಿಗೆ ದಿ: 14-05-2014ರ ಆರೋಪಿ ದಸ್ತಗಿರಿ ಮಹಜರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಯನ್ನು ನಿಪಿ-4 ಎಂದು, ಸಾಕ್ಷಿ ಸಹಿಯನ್ನು ನಿಪಿ.4(ಎ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಕೋಟಾ ಠಾಣೆಯಲ್ಲಿ ಮಾಡಿರುತ್ತೇನೆ. ಸದ್ರಿ ಸಹಿಯನ್ನು ಯಾವ ಕಾರಣಕ್ಕಾಗಿ ಮಾಡಿದ್ದೇನೆ ಎಂದು ನನಗೆ ನೆನಪಿಲ್ಲ. ಸದ್ರಿ ದಾಖಲೆಯಲ್ಲಿ ಎನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಅವರನ್ನು ಪೊಲೀಸರು ಬಂಧಿಸಿಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**<u>ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:</u>**

ದಿ: 01405.2014 ರಂದು ಕೋಟಾ ಪೊಲೀಸರು 1 ಮತ್ತು 3ನೇ ಆರೋಪಿತರನ್ನು ಠಾಣೆಯಲ್ಲಿ ಪೊಲೀಸರು ವಶಕ್ಕೆ ಪಡೆದಾಗ ನಾನು ಹಾಜರು ಇದ್ದು ಅವರನ್ನು

ಬೆಳಗ್ಗೆ 10-10 ರಿಂದ 10-40ರವರೆಗೆ ದಸ್ತಗಿರಿ ಮಾಡಿ ಪಂಚನಾಮೆ ಜರುಗಿಸಿ ನಿಪಿ-4ಕ್ಕೆ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವನ್ನು ನಾನು ಓದಿ ದಾಖಲೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆಗ ನಾನು, 1 ಮತ್ತು 3ನೇ ಆರೋಪಿತರು ದಾಖಲೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಸದ್ರಿ ಆರೋಪಿತರು ನಮ್ಮ ಕಾರ್ಖಾನೆಯಲ್ಲಿ ನೌಕರರಾಗಿ ಕೆಲಸ ಮಾಡುತ್ತಿದ್ದು ಮೇಲಿನ ಕ್ರಮ ನನ್ನ ಸಮಕ್ಷಮ ನಡೆಸಿದ್ದರೂ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.  ಆರೋಪಿತರು ಸ್ವಲ್ಪ ಸಮಯ ನಮ್ಮ ಕಾರ್ಖಾನೆಯಲ್ಲಿ ಕೆಲಸ ಮಾಡಿರುತ್ತಾರೆ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**